159ನೇ-6
96

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) ರವರು, ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

ಸೂಚನೆ: ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇದಕ್ಕೆ 20.03.2023ರಲ್ಲಿಯೇ 15 ಬೋಧಕ ಹಾಗೂ 17 ಬೋಧಕೇತರ ಹುದ್ದೆಗಳಿಗೆ ಸರ್ಕಾರ (ಆರ್ಥಿಕ ಇಲಾಖೆ) ಮಂಜೂರಾತಿ ನೀಡಿದ್ದರೂ ಕೂಡಾ ಇದುವರೆಗೆ ನೇಮಕಾತಿ ಮಾಡಿಕೊಳ್ಳದೇ ವಿಳಂಬ ನೀತಿ ಅನುಸರಿಸುತ್ತಿರುವ ಕುರಿತು ಮತ್ತು ಖಾಯಂ ನೇಮಕಾತಿ ಪ್ರಕ್ರಿಯೆ ತಕ್ಷಣ ಪ್ರಾರಂಭಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ: ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ 15 ಬೋಧಕ ಹಾಗೂ 17 ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಈ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಸಹಮತಿ ನೀಡಿರುತ್ತದೆ. ಸದರಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸುವ ಸಮಯದಲ್ಲಿ ಸಿಬ್ಬಂಧಿ ಮತ್ತು ಆಡಳಿತ ಸುಧಾರಣಾ (ಸೇವಾ ನಿಯಮಗಳು)ಇಲಾಖೆಯು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜಾತಿಗಳಿಗೆ ಒಳಮೀಸಲಾತಿಯನ್ನು ಕಲ್ಪಿಸುವ ಪ್ರಕ್ರಿಯೆ ಪ್ರಾರಂಭಿಸಿದ್ದರಿಂದ ನೇರ ನೇಮಕಾತಿ ಮಾಡಲು ಯಾವುದೇ ಅಧಿಸೂಚನೆಯನ್ನು ಪ್ರಕಟಿಸದಂತೆ ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆಯು ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೆನೆನಿ 2024, ದಿನಾಂಕ:25.11.2024ರಲ್ಲಿ ಎಲ್ಲಾ ಇಲಾಖೆಗಳಿಗೆ ನಿರ್ದೇಶನ ನೀಡಲಾಗಿತ್ತು. ಈ ಕಾರಣಗಳಿಂದ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿರುತ್ತದೆ. ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧಿಸೂಚನೆಯನ್ವಯ ನೇಮಕಾತಿಗೆ ಈ ಹಿಂದೆ ಗುರುತಿಸಲಾಗಿದ್ದ ರೋಸ್ಟರ್ ಬಿಂದುಗಳಲ್ಲಿ ವ್ಯತ್ಯಾಸ ಉಂಟಾಗಿರುತ್ತದೆ. ಈ ಕಾರಣಗಳಿಂದ ಹೊಸ ನಿಯಮಗಳ ಪ್ರಕಾರ ಈಗ ಗುರುತಿಸಲಾಗಿರುವ ರೋಸ್ಟರ್ ಬಿಂದುಗಳನ್ನು ಪರಿಶೀಲಿಸಿ ಸಹಮತಿ ನೀಡಲು ಕಡತವನ್ನು ಸಮಾಜ ಕಲ್ಯಾಣ ಇಲಾಖೆಗೆ ಕಳುಹಿಸಲಾಗಿತ್ತು. ಸದರಿ ಇಲಾಖೆಯು ಪ್ರಸ್ತುತ ಸಿದ್ದಪಡಿಸಿರುವ ರೋಸ್ಟರ್ ಬಿಂದುಗಳಿಗೆ ಸಹಮತಿ ನೀಡಿರುತ್ತದೆ. ಹೈದರಾಬಾದ್-ಕರ್ನಾಟಕ ಭಾಗಕ್ಕೆ ಅನ್ವಯವಾಗುವ ಮೀಸಲಾತಿಗೆ ಸಂಬಂಧಿಸಿದಂತೆ ರೋಸ್ಟರ್ ಬಿಂದುಗಳನ್ನು ಗುರುತಿಸಿದ್ದು, ಇವುಗಳನ್ನು ಪರಿಶೋಧಿಸಿ ಸಹಮತಿ ಕೋರಿ ಕಡತವನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಇಲಾಖೆಗೆ ಕಳುಹಿಸಲಾಗಿದೆ. ಈ ಇಲಾಖೆಯಿಂದ ರೋಸ್ಟರ್ ಬಿಂದುಗಳ ಬಗ್ಗೆ ಸಹಮತಿ ಪಡೆದ ಕೂಡಲೇ ಸದರಿ ಹುದ್ದೆಗಳಿಗೆ ನೇಮಕಾತಿ ಮಾಡುವ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಧಿಸೂಚನೆ ಹೊರಡಿಸಲು ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಸೂಚಿಸಲಾಗುವುದು.

ಕಡತ ಸಂಖ್ಯೆ: ಗ್ರಾಅಪಂರಾ 240 ಜಿಪಸ 2026

(ಈಶ್ವರ್ ಖಂಡ್ರೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು